**Fax:** 08282-256262
**E-mail:**kuvempuacademic@gmail.com

Phone No - 08282-256149
**Website:**www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

**Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO Rankings**

ಸಂಖ್ಯೆ:ಕುವಿ:ಶೈವಿ:ಎಸಿ–5: 2908 :2022–23

ದಿನಾಂಕ:15–10–2022

## ಸುತ್ತೋಲೆ

**ವಿಷಯ: ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು – ಇವರಿಂದ ನಡೆಸಲಾಗುತ್ತಿರುವ ಮುಕ್ತ ಶಾಲೆಯಲ್ಲಿನ 10+2 ತರಗತಿಯಲ್ಲಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಎಲ್ಲಾ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ನೀಡದಿರುವ ಕುರಿತು.**

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ ಇಡಿ 248 ಯುಆರ್‌ಸಿ 2021, ದಿನಾಂಕ:25–11–2021.
2. ಈ ಕಛೇರಿ ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ–5:5740:2021–22, ದಿ:10–03–2022.
3. ಸರ್ಕಾರದ ಪತ್ರ ಸಂಖ್ಯೆ ಇಡಿ 248 ಯುಆರ್‌ಸಿ 2021, ದಿನಾಂಕ:12–09–2022.
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:12–10–2022.

*****

ಉಲ್ಲೇಖಿತ (1)ರ ಸರ್ಕಾರದ ಅಧೀನ ಕಾರ್ಯದರ್ಶಿಯವರ ಆದೇಶದನ್ವಯ ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು – ಇಲ್ಲಿ ಮುಕ್ತ ಶಾಲೆಯಲ್ಲಿನ 10+2 ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯಗಳ ಅಧೀನದಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆಯಲು ಉಲ್ಲೆಖಿತ (2)ರ ಈ ಕಛೇರಿ ಸುತ್ತೋಲೆಯಲ್ಲಿ ಅನುಮತಿ ನೀಡಲಾಗಿತ್ತು.

ಈ ಕುರಿತು ಉಲ್ಲೇಖಿತ (3)ರ ಸರ್ಕಾರದ ಅಧೀನ ಕಾರ್ಯದರ್ಶಿಯವರ ಪತ್ರದಲ್ಲಿ ಉಲ್ಲೇಖಿತ (1)ರ ಸರ್ಕಾರದ ಪತ್ರದಲ್ಲಿನ ನಿರ್ದೇಶನವನ್ನು ಈ ಕೂಡಲೇ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ ಎಂದು ಹಾಗೂ ಮಾನ್ಯ ನ್ಯಾಯಾಲಯದ ಅಂತಿಮ ತೀರ್ಪಿನವರೆಗೆ ಯಾವುದೇ ಪ್ರವೇಶಾತಿಯನ್ನು ಮಾಡದಂತೆ, ಒಂದು ವೇಳೆ ಈಗಾಗಲೇ ಪ್ರವೇಶಾತಿ ನೀಡಿದ್ದಲ್ಲಿ ಮುಂದಿನ ನಿರ್ದೇಶನದವರೆಗೆ ತಡೆಹಿಡಿಯುವಂತೆ ತಿಳಿಸಲಾಗಿದೆ. ಆದ್ದರಿಂದ ಉಲ್ಲೇಖಿತ (3)ರ **ಸರ್ಕಾರದ ಪತ್ರದನ್ವಯ ಕುವೆಂಪು ವಿಶ್ವವಿದ್ಯಾಲಯಗಳ ಅಧೀನದಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದಿರುವ ಮೇಲ್ಕಂಡ ಸಂಸ್ಥೆಯ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ತಡೆಹಿಡಿಯಲು ಹಾಗೂ ಇನ್ನು ಮುಂದೆ ನ್ಯಾಯಾಲಯದ ಅಂತಿಮ ತೀರ್ಪಿನವರೆಗೆ ಪ್ರವೇಶಾತಿ ಮಾಡಿಕೊಳ್ಳದಿರಲು ಈ ಮೂಲಕ ತಿಳಿಸಲಾಗಿದೆ.** ಹೆಚ್ಚಿನ ಮಾಹಿತಿಗಾಗಿ ಉಲ್ಲೇಖಿತ (3)ರ ಸರ್ಕಾರದ ಪತ್ರವನ್ನು ವಿಶ್ವವಿದ್ಯಾಲಯದ (www.kuvempu.ac.in) ಅಂತರ್‌ಜಾಲದಲ್ಲಿ ಪ್ರಕಟಿಸಲಾಗಿದೆ.

ಕುಲಪತಿಗಳ ಅನುಮೋದಿಸಲ್ಪಟ್ಟಿದೆ

ಉಪಕುಲಸಚಿವರು
ಉಪ ಕುಲಸಚಿವ
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

15/10/2022

ಗೆ,

1. ಅಧ್ಯಕ್ಷರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), BISE, #52/2, Maruti Farm, Dombarahalli, Lakshmipura Post, Dasanapura Hobli, ಬೆಂಗಳೂರು – 562162.
2. ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ / ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಸ್ನಾತಕ ಪದವಿಗಳ ಸಂಯೋಜಿತ/ ನೇರ ಆಡಳಿತ / ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಗಳು :**

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪರೀಕ್ಷಾಂಗ); ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ರಕ್ಷಣಾ ಕಡತ 3. ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರ

ಇ-ಕಛೇರಿ ಸಂ: ಇಡಿ 248 ಯುಆರ್‌ಸಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:12.09.2022

**ಇಂದ**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು

13 SEP 2022
3901

**ಇವರಿಗೆ**
ಕುಲಪತಿಗಳು/ಕುಲಸಚಿವರು,
ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳು.

ಮಾನ್ಯರೇ,

ವಿಷಯ: ಭಾರತ್ ಇನ್ಸ್‌ಟ್ಯೂಟ್ ಆಫ್ ಸ್ಕೂಲ್ ಎಜುಕೇಷನ್ ಸಂಸ್ಥೆ, ಬೆಂಗಳೂರು ಇವರಿಂದ ನಡೆಸಲಾಗುತ್ತಿರುವ ಮುಕ್ತ ಶಾಲೆಯಲ್ಲಿನ 10+2 ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ರಾಜ್ಯದಲ್ಲಿನ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಸರ್ಕಾರದ ಅನುಮತಿ ನೀಡುವ ಕುರಿತು.

ಉಲ್ಲೇಖ:- 1) ಇದೇ ಸಮಸಂಖ್ಯೆಯ ಸರ್ಕಾರದ ಪತ್ರ ದಿನಾಂಕ:25.11.2021
2) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಆದೇಶ ಸಂಖ್ಯೆ: ಇಡಿ 103 ಎಸ್‌ಎಲ್‌ವಿ 2018, ದಿನಾಂಕ:31.12.2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1)ರ ಸರ್ಕಾರದ ಪತ್ರದಲ್ಲಿ ಭಾರತ್ ಇನ್ಸ್‌ಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್ (ರಿ), ಬೆಂಗಳೂರು ಇವರಿಂದ ನಡೆಸಲಾಗುತ್ತಿರುವ ಮುಕ್ತ ಶಾಲೆಯ ವಿದ್ಯಾರ್ಥಿಗಳಿಗೆ ರಾಜ್ಯದಲ್ಲಿನ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳ ಅಧೀನದಲ್ಲಿ ಬರುವ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆಯಲು ಅನುಮತಿಯನ್ನು ನೀಡಲಾಗಿರುತ್ತದೆ.

ಆದರೆ, ಭಾರತದ ಮುಕ್ತ ಶಾಲಾ ವ್ಯವಸ್ಥೆಯ ಅಗ್ರಮಾನ್ಯ ಸಂಸ್ಥೆಯಾದ (Apex Body) ರಾಷ್ಟ್ರೀಯ ಶಾಲಾ ಶಿಕ್ಷಣ ಪರಿಷತ್ತು ಭಾರತ್ ಇನ್ಸ್ ಟ್ಯೂಟ್ ಆಫ್ ಸ್ಕೂಲ್ ಎಜುಕೇಷನ್ ಸಂಸ್ಥೆಗೆ ನೀಡಲಾದ ಅನುಮತಿಯ ಕುರಿತು ಸ್ಪಷ್ಟೀಕರಣ ಕೋರಿದ ಮೇರೆಗೆ ಭಾರತ್ ಇನ್ಸ್ ಟ್ಯೂಟ್ ಸಂಸ್ಥೆಯು ನಡೆಸುತ್ತಿರುವ ಕರ್ನಾಟಕ ಮುಕ್ತ ಶಾಲೆ ಕಲಿಕಾ ಕೇಂದ್ರಗಳಿಗೆ ನಿರ್ದೇಶಕರು (ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರು ಇತರೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಸರ್ಕಾರಕ್ಕೆ ವರದಿ ಸಲ್ಲಿಸಿರುವ ಹಿನ್ನಲೆಯಲ್ಲಿ ಸರ್ಕಾರವು ಪುನರ್ ಪರಿಶೀಲಿಸಿ ಭಾರತ್ ಇನ್ಸ್‌ಟ್ಯೂಟ್ ಆಫ್ ಸ್ಕೂಲ್ ಎಜುಕೇಷನ್ ಸಂಸ್ಥೆ (BISE)ಯ ಬೆಂಗಳೂರು ಈ ಸಂಸ್ಥೆಯ ಹೆಸರು ಸರ್ಕಾರಿ ಸಂಸ್ಥೆಯ ಹೆಸರನ್ನು ಅನುಕರಿಸುವಂತಿದ್ದು, ಇದು ಬಹಳಷ್ಟು ವಿದ್ಯಾರ್ಥಿಗಳನ್ನು ದಿಕ್ಕುತಪ್ಪಿಸಿ ಮುಂದೆ ಬೃಹತ್ ಹಗರಣಕ್ಕೆ ಹಾಗೂ ವಂಚನೆಗೆ ಒಳಗಾಗುವ ಸಂಭವವಿರುವುದರಿಂದ, ಈ ದಿಸೆಯಲ್ಲಿ ರಾಜ್ಯ ಸರ್ಕಾರದ ವಿಶ್ವಾಸರ್ಹತೆಗೆ ದಕ್ಕೆ ಉಂಟಾಗುವ ಸಂದರ್ಭವೂ ಸಹ ಎದುರಾಗಲಿದ್ದು, ಮಕ್ಕಳ ಶೈಕ್ಷಣಿಕ ಗುಣಮಟ್ಟದ ಹಿತದೃಷ್ಟಿಯಿಂದ ಭಾರತ್ ಇನ್ಸ್‌ಟ್ಯೂಟ್ ಆಫ್ ಸ್ಕೂಲ್ ಎಜುಕೇಷನ್ ಸಂಸ್ಥೆ, ಬೆಂಗಳೂರು

..2

Ac-5

Registrar's
Personal Section.
To No. 323
Date 13/9/22

13/9/2022
13/9/22

ಇವರಿಗೆ ಮುಕ್ತ ಶಾಲೆಯನ್ನು ನಡೆಸಲು ನೀಡಲಾಗಿದ್ದ ಮಾನ್ಯತೆಯನ್ನು ಉಲ್ಲೇಖ (2) ರನ್ವಯ ರದ್ದುಪಡಿಸಿ ಆದೇಶಿಸಲಾಗಿರುತ್ತದೆ.

ಪ್ರಸ್ತುತ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಆದೇಶ ಸಂಖ್ಯೆ: ಇಡಿ 103 ಎಸ್ ಎಲ್‌ಬಿ 2018, ದಿನಾಂಕ: 31.12.2021ರ ಆದೇಶವನ್ನು ಪ್ರಶ್ನಿಸಿ ಭಾರತ್ ಇನ್ಸ್‌ಟ್ಯೂಟ್ ಆಫ್ ಸ್ಕೂಲ್ ಎಜುಕೇಷನ್ ಸಂಸ್ಥೆಯವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 228/2022ನ್ನು ದಾಖಲಿಸಿದ್ದು, ಈ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಮಧ್ಯಂತರ ತಡೆಯಾಜ್ಞೆಯನ್ನು ನೀಡಿರುತ್ತದೆ.

ಮೇಲಿನ ಅಂಶಗಳ ಹಿನ್ನಲೆಯಲ್ಲಿ ಭಾರತ್ ಇನ್ಸ್‌ಟ್ಯೂಟ್ ಆಫ್ ಸ್ಕೂಲ್ ಎಜುಕೇಷನ್ ಸಂಸ್ಥೆ, ಬೆಂಗಳೂರು ಇವರಿಂದ ನಡೆಸಲಾಗುತ್ತಿರುವ ಮುಕ್ತ ಶಾಲೆಯಲ್ಲಿನ 10+2 ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ರಾಜ್ಯದಲ್ಲಿನ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಿಗೆ ನೀಡಲಾದ ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿನ ನಿರ್ದೇಶನವನ್ನು ಈ ಕೂಡಲೇ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ ಎಂದು, ಹಾಗೂ ಮಾನ್ಯ ನ್ಯಾಯಾಲಯದ ಅಂತಿಮ ತೀರ್ಪಿನವರೆಗೆ ಯಾವುದೇ ಪ್ರವೇಶಾತಿಯನ್ನು ಮಾಡದಂತೆ, ಒಂದು ವೇಳೆ ಈಗಾಗಲೇ ಪ್ರವೇಶಾತಿ ನೀಡಿದ್ದಲ್ಲಿ ಮುಂದಿನ ನಿರ್ದೇಶನದವರೆಗೆ ತಡೆಹಿಡಿಯುವಂತೆ ಈ ಮೂಲಕ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಶೀತಲ್ ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

ಪ್ರತಿ ಮಾಹಿತಿಗಾಗಿ:-

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) The General Secretary, Council of Board of School Education in India (COBSE), 6th Big Jo's Tower, A-8 Netaji Subhash Place, Ring Road, Delhi-110034.
3) ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
4) ಕಾರ್ಯನಿರ್ವಾಹಕ ನಿರ್ದೇಶಕರು, ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
5) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
6) ಸರ್ಕಾರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
7) ಸರ್ಕಾರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8) ಅಧ್ಯಕ್ಷರು, ಭಾರತ್ ಇನ್ಸಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್ (ರಿ), ದೊಂಭರಹಳ್ಳಿ, ಲಕ್ಷ್ಮೀಪುರ ಅಂಚೆ, ದಾಸನಪುರ ಹೋಬಳಿ, ಬೆಂಗಳೂರು-562162.